# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572103

ದೂರವಾಣಿ: 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

**ಸಂಖ್ಯೆ: ತುವಿ:ಕಾ.ಅ.ಪ: ಸಂಯೋಜನೆ:2025-26** -2407 **ದಿನಾಂಕ: 10.10.2024**

## ಸುತ್ತೋಲೆ

**ವಿಷಯ:** **2025-26ನೇ ಶೈಕ್ಷಣಿಕ ಸಾಲಿನ ಸಂಯೋಜನೆಗೆ ಕಾಲೇಜುಗಳು ಅರ್ಜಿ ಸಲ್ಲಿಸಲು ಪೂರ್ವಸಿದ್ಧತೆಯನ್ನು ಮಾಡಿಕೊಳ್ಳುವ ಕುರಿತು.**

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ ಸಂ.ಇಡಿ 212 ಯುಎನ್ಇ 2024, ಬೆಂಗಳೂರು, ದಿನಾಂಕ: 04.10.2024
2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ 10.10.2024

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (01)ರ ಸರ್ಕಾರದ ಆದೇಶದಲ್ಲಿ 2025-26 ನೇ ಶೈಕ್ಷಣಿಕ ಸಾಲಿನ ಸಂಯೋಜನೆ ಪ್ರಕ್ರಿಯೆಯನ್ನು ಪ್ರಾರಂಭಿಸಲು ಆದೇಶಿಸಲಾಗಿರುತ್ತದೆ.

ಈ ಸಂಬಂಧ ಸಂಯೋಜಿತ ಕಾಲೇಜುಗಳ ಸಂಯೋಜನೆ ಅರ್ಜಿಗಳನ್ನು ಯು.ಯು.ಸಿ.ಎಂ.ಎಸ್. ಆನ್‌ಲೈನ್ ಮೂಲಕ ಆಹ್ವಾನಿಸಿ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000 ಪ್ರಕರಣ 59 (10)ರ ಅನ್ವಯ ಸಂಯೋಜನೆಯ ಎಲ್ಲಾ ಪ್ರಕ್ರಿಯೆಗಳನ್ನು ದಿನಾಂಕ: 03.02.2025ರೊಳಗೆ ಪೂರ್ಣಗೊಳಿಸಿ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಕಳುಹಿಸಬೇಕಾಗಿದ್ದು, **2025-26ನೇ ಶೈಕ್ಷಣಿಕ ಸಾಲಿನ ಸಂಯೋಜನೆಗೆ UUCMS ಮುಖಾಂತರ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ದಿನಾಂಕ: 25.10.2024 ರಿಂದ ಪ್ರಾರಂಭವಾಗಿ ದಿನಾಂಕ: 05.11.2024 ಕ್ಕೆ ಮುಕ್ತಾಯಗೊಳ್ಳುವುದು ಎಂಬುದನ್ನು ತಮಗೆ ಈ ಮೂಲಕ ತಿಳಿಸಿದೆ.**

ಈ ಹಿನ್ನಲೆಯಲ್ಲಿ ಎಲ್ಲಾ ಸಂಯೋಜಿತ ಕಾಲೇಜುಗಳು 2025-26ನೇ ಸಾಲಿನ ಸಂಯೋಜನೆಗೆ ಸಂಬಂಧಿಸಿದಂತೆ, ಕಳೆದ ಸಾಲಿನಂತೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು, ಅರ್ಜಿಯ ಪ್ರಕಾರ ಕ್ರಮಬದ್ಧವಾಗಿ ದಾಖಲಾತಿಗಳನ್ನು ಇಟ್ಟುಕೊಳ್ಳಲು ಮತ್ತು 2024-25ನೇ ಸಾಲಿನಲ್ಲಿ ಸ್ಥಳೀಯ ವಿಚಾರಣಾ ಸಮಿತಿಯು ಸೂಚಿಸಿರುವ ಮಾನದಂಡಗಳನ್ನು ಪೂರೈಸಿರತಕ್ಕದ್ದು ಹಾಗೂ ಸ್ಥಳೀಯ ವಿಚಾರಣಾ ಸಮಿತಿಯು ಕಾಲೇಜುಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಎಲ್ಲಾ ದಾಖಲಾತಿಗಳನ್ನು ಪರಿಶೀಲನೆಗೆ ಒದಗಿಸಲು ಸಿದ್ಧತೆ ಮಾಡಿಕೊಳ್ಳಲು ತಿಳಿಸಲಾಗಿದೆ.

2025-26ನೇ ಶೈಕ್ಷಣಿಕ ಸಾಲಿನ ಸಂಯೋಜನೆ ಅಧಿಸೂಚನೆ ಮತ್ತು ಸಂಯೋಜನೆ ಶುಲ್ಕದ ಅಧಿಸೂಚನೆಗಳನ್ನು ಅರ್ಜಿ ಸಲ್ಲಿಸುವ ಪ್ರಕ್ರಿಯೆ ಪ್ರಾರಂಭಕ್ಕೂ ಮುಂಚಿತವಾಗಿ ಹೊರಡಿಸಲಾಗುವುದು. 2025-26ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆಗೆ ಅರ್ಜಿ ಸಲ್ಲಿಸುವ ಕಾಲೇಜುಗಳು ಸಂಬಂಧಿಸಿದ ದಾಖಲೆಗಳನ್ನು ಪೂರ್ವಸಿದ್ಧತೆ ಮಾಡಿಕೊಂಡು UUCMS ತಂತ್ರಾಂಶದಲ್ಲಿ ದಿನಾಂಕ: 25.10.2024 ರಿಂದ ಅರ್ಜಿ ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ.

**ನಿರ್ದೇಶಕರು** 14-10-24

ನಿರ್ದೇಶಕರು
ಕಾಲೇಜು ಅಭಿವೃದ್ಧಿ ಪರಿಷತ್
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

**ಗೆ:**

**ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1) ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2) ಕಛೇರಿ ಪ್ರತಿ.